# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಲಕ್ಷ್ಮಿದೇವಿ, ಅಧ್ಯಕ್ಷರು, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**
1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/61/18-19 ದಿನಾಂಕ: 20/09/2019.
2. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ವಿಚಾರಣಾ ನೋಟಿಸ್ ದಿನಾಂಕ:18/07/2019.
3. ಶ್ರೀಮತಿ ಲಕ್ಷ್ಮಿದೇವಿ, ಅಧ್ಯಕ್ಷರು, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರು ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:13/09/2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಶ್ರೀಮತಿ ಲಕ್ಷ್ಮಿದೇವಿ, ಅಧ್ಯಕ್ಷರು, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು ತುಮಕೂರು ಜಿಲ್ಲೆ ರವರು ಚಂದ್ರಗಿರಿ ಗ್ರಾಮ ಪಂಚಾಯಿತಿಯಲ್ಲಿ ಅವ್ಯವಹಾರ ಮತ್ತು ಕರ್ತವ್ಯ ಲೋಪವೆಸಗಿರುವುದು ವಿಚಾರಣೆಯಿಂದ ಸಾಬೀತಾಗಿರುತ್ತದೆಂದು ವಿಚಾರಣಾ ವರದಿಯೊಂದಿಗೆ ವರದಿ ಮಾಡಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸುವ ಕುರಿತು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರು ಸರ್ಕಾರಕ್ಕೆ ಪ್ರಸ್ತಾಪಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರು ಕಾರಣ ಕೇಳುವ ನೋಟೀಸಿಗೆ ಈ ಕೆಳಕಂಡಂತೆ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

- 14ನೇ ಹಣಕಾಸು ಯೋಜನೆಯಲ್ಲಿ ಹಣ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆಯೆಂದು ಮುಖ್ಯ ಯೋಜನಾಧಿಕಾರಿಗಳು ಜಿಲ್ಲಾ ಪಂಚಾಯಿತಿಗೆ ವರದಿ ನೀಡಿರುತ್ತಾರೆ. ಆದರೆ ಇದಕ್ಕೂ ಮೊದಲು ದಿನಾಂಕ:19-07-2018 ರಂದು ಕೆಲವು ಸದಸ್ಯರು ಸರ್ಕಾರಕ್ಕೆ ನೀಡಿದ ದೂರಿನ ಮೇರೆಗೆ ಚಂದ್ರಗಿರಿ ಗ್ರಾಮ ಪಂಚಾಯಿತಿಯಲ್ಲಿ ತನಿಖೆ ನಡೆಸಿ ವರದಿ ನೀಡುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚಿಸಿದ್ದು ಜಿಲ್ಲಾ ಪಂಚಾಯಿತಿಯವರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹಾಗೂ ಲೆಕ್ಕಾಧಿಕಾರಿಗಳು ತಪಾಸಣೆ ನಡೆಸಿ ಜಿಲ್ಲಾ ಪಂಚಾಯಿತಿಗೆ ದಿನಾಂಕ:18-08-2018ರಂದು ವರದಿ ನೀಡಿರುತ್ತಾರೆ. ಆ ವರದಿಯನ್ನು ಸರ್ಕಾರಕ್ಕೆ ಕಳುಹಿಸಿಲ್ಲ. ಏಕೆಂದರೆ ಆ ವರದಿಯಲ್ಲಿ ಯಾವುದೇ ಆರೋಪವಿಲ್ಲ ಜೊತೆಗೆ 2015-16, 2016-17, 2017-18ರ ಸ್ಥಳೀಯ ಲೆಕ್ಕ ಪರಿಶೋಧನಾ ವರದಿಗಳಲ್ಲಿ ಯಾವುದೇ ಆರೋಪವಾಗಲಿ ಅಥವಾ ವಸೂಲಿಯಾಗಲಿ ಇರುವುದಿಲ್ಲ. ಆದರೆ ತಾಲ್ಲೂಕು ಪಂಚಾಯಿತಿ ವರದಿ ಹಾಗೂ ಲೆಕ್ಕ ಪರಿಶೋಧನಾ ವರದಿಯಲ್ಲಿ ಆರೋಪವಿಲ್ಲವೆಂದು ತಿಳಿದ ಹಾಲಿ ಮಧುಗಿರಿ ಶಾಸಕರು ತನ್ನ ಪತಿಯ ಮೇಲಿನ ರಾಜಕೀಯ ದ್ವೇಷದಿಂದ ಜಿಲ್ಲಾ ಪಂಚಾಯಿತಿಗೆ ಪತ್ರ ನೀಡಿ ತನಿಖೆ ನಡೆಸಲು ಒತ್ತಡ ಹೇರಿದ್ದರಿಂದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರು ಮುಖ್ಯ ಯೋಜನಾಧಿಕಾರಿಗಳಿಂದ ತನಿಖೆ ನಡೆಸಿ ಉದ್ದೇಶ ಪೂರ್ವಕವಾಗಿ ಅಧ್ಯಕ್ಷರ ಕ್ರಮವಹಿಸಲು ಶಿಫಾರಸ್ಸು ಮಾಡಿದ್ದಾರೆ. ಹಾಲಿ ಶಾಸಕರು ನಿವೃತ್ತ ಐ.ಎ.ಎಸ್. ಅಧಿಕಾರಿಯಾಗಿದ್ದು, ಈ ಹಿಂದೆ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಅಧಿಕಾರಿಯಾಗಿದ್ದಾಗ ತನಿಖೆ ನಡೆಸಿದ ಮುಖ್ಯ ಯೋಜನಾಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ

ಅವರ ಕೈ ಕೆಳಗೆ ಕೆಲಸ ಮಾಡಿರುತ್ತಾರೆ. ಶಾಸಕರು ಮತ್ತು ಮುಖ್ಯಯೋಜನಾಧಿಕಾರಿಗಳು ಸೇರಿ ಕುತಂತ್ರ ನಡೆಸಿ ಸಿ.ಇ.ಓ ರವರಿಗೆ ಒತ್ತಡ ಹೇರಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಕಾರಣರಾಗಿರುತ್ತಾರೆಂದು ತಿಳಿಸಿರುತ್ತಾರೆ.

- ಚಂದ್ರಗಿರಿ ಮತ್ತು ದೊಡ್ಡೇರಿ ಎಂಬ ಎರಡು ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಿ.ಡಿ.ಓ ಯೋಗಶ್ರೀನಿವಾಸರ ಅಮಾನತ್ತು ಆದೇಶದ ಉಲ್ಲೇಖದಲ್ಲಿ ದೊಡ್ಡೇರಿ ಗ್ರಾಮ ಪಂಚಾಯಿತಿ ತನಿಖಾ ವರದಿಯನ್ನು ಮುಖ್ಯ ಲೆಕ್ಕಾಧಿಕಾರಿಗಳು ದಿನಾಂಕ:25-07-2018 ರಂದು ನೀಡಿರುತ್ತಾರೆ. ಚಂದ್ರಗಿರಿ ಗ್ರಾಮ ಪಂಚಾಯಿತಿ ತನಿಖಾ ವರದಿಯನ್ನು ಮುಖ್ಯ ಯೋಜನಾಧಿಕಾರಿಗಳು ದಿನಾಂಕ:25-09-2018 ರಂದು ನೀಡಿರುತ್ತಾರೆ. ಪ್ರಸ್ತಾವನೆ ಮತ್ತು ಪಿ.ಡಿ.ಓ ಅಮಾನತ್ತು ಆದೇಶದಲ್ಲಿ ಕಂಡು ಬಂದಿದೆ ಎಂದು ಅಮಾನತ್ತು ಮಾಡಿರುತ್ತಾರೆ. ಆದರೆ ಜಿಲ್ಲಾ ಪಂಚಾಯಿತಿಯಿಂದ ತಮಗೆ ಮಾತ್ರ ಸಮಜಾಯಿಷಿ ಕೇಳಿ ನೋಟೀಸ್ ನೀಡಿ ಸಮಜಾಯಿಷಿ ಪಡೆದು ಸರ್ಕಾರಕ್ಕೆ ಕ್ರಮವಹಿಸಲು ಶಿಫಾರಸ್ಸು ಮಾಡಿರುತ್ತಾರೆ. ಆದರೆ ದೊಡ್ಡೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಸಮಜಾಯಿಷಿ ಕೇಳಿ ನೋಟೀಸ್ ಕೂಡ ಇದುವರೆವಿಗೂ ನೀಡಿರುವುದಿಲ್ಲ. ಏಕೆಂದರೆ ದೊಡ್ಡೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಲಿ ಶಾಸಕರ ಜಾತಿಯವರು ಹಾಗೂ ಅವರ ಪಕ್ಷದವರಾಗಿರುವುದರಿಂದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರವರಿಗೆ ಹೇಳಿ ದೊಡ್ಡೇರಿ ಅಧ್ಯಕ್ಷರಿಗೆ ನೋಟೀಸ್ ನೀಡದಂತೆ ಒತ್ತಡ ಹೇರಿರುತ್ತಾರೆಂದು ತಿಳಿಸಿರುತ್ತಾರೆ.
- ಆದ್ದರಿಂದ ತಮ್ಮಲ್ಲಿ ಮನವಿ ಮಾಡುವುದೇನೆಂದರೆ ಅವಿದ್ಯಾವಂತಳಾದ ಮತ್ತು ಹಿಂದುಳಿದ ವರ್ಗಕ್ಕೆ ಸೇರಿದ ತಾನು ಸಾಮಾನ್ಯ ಮೀಸಲಾತಿಯಲ್ಲಿ ಅಧ್ಯಕ್ಷಳಾಗಿರುತ್ತೇನೆಂದು, ಬದಲಾದ ರಾಜಕೀಯ ಸನ್ನಿವೇಶದಲ್ಲಿ ಈಗಿನ ಜೆ.ಡಿ.ಎಸ್. ಶಾಸಕರು ಹಾಗೂ ಅವರ ಜಾತಿಯ ಸದಸ್ಯರು ಮತ್ತು ಹಿಂಬಾಲಕರು ಸೇರಿಕೊಂಡು ಶಾಸಕರ ಕೈ ಕೆಳಗೆ ಕೆಲಸ ಮಾಡಿದ್ದ ಮುಖ್ಯ ಯೋಜನಾಧಿಕಾರಿಗಳನ್ನು ಬಳಸಿಕೊಂಡು ತಮ್ಮ ಮೇಲೆ ಉದ್ದೇಶ ಪೂರ್ವಕವಾಗಿ ಮೇಲ್ನೋಟಕ್ಕೆ ಆರೋಪ ಹೊರಿಸಿ ಸಿ.ಇ.ಓ ರವರ ಮೇಲೆ ಒತ್ತಡ ಹೇರಿ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಸಲ್ಲಿಸಿರುತ್ತಾರೆ.
- ಅಧ್ಯಕ್ಷರಾದ ದಿನದಿಂದ ಇಲ್ಲಿಯವರೆಗೆ ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ದೃಷ್ಟಿಯಿಂದ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ನಿಶ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸಿರುವುದಾಗಿ, ಆಡಳಿತಾತ್ಮಕವಾಗಿ ಹಾಗೂ ಆರ್ಥಿಕವಾಗಿ ತಮ್ಮ ವೈಯಕ್ತಿಕವಾದ ಯಾವುದೇ ರೀತಿಯ ಹಸ್ತಕ್ಷೇಪವನ್ನು ತಾವು ಮಾಡಿರುವುದಿಲ್ಲ. ಸರ್ಕಾರದ ಆದೇಶದ ಮೇರೆಗೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಹಾಗೂ ಲೆಕ್ಕಾಧಿಕಾರಿಗಳು ನಡೆಸಿರುವ ಲೆಕ್ಕ ತಪಾಸಣಾ ವರದಿ ಮತ್ತು 2015-16, 2016-17, 2017-18ರ ಸ್ಥಳೀಯ ಲೆಕ್ಕ ಪರಿಶೋಧನಾ ವರದಿಯನ್ನು ಪರಿಶೀಲಿಸಿ ಹಾಗೂ ಪಿ.ಡಿ.ಓ ಅಮಾನತ್ತು ಆದೇಶವನ್ನು ಕೂಲಂಕುಷವಾಗಿ ಪರಿಶೀಲನೆ ಮಾಡಬೇಕೆಂದು ಮತ್ತು ಒತ್ತಡಕ್ಕೆ ಮಣಿದು ಮುಖ್ಯ ಯೋಜನಾಧಿಕಾರಿಗಳು ಮೇಲ್ನೋಟಕ್ಕೆ ಅವ್ಯವಹಾರ ಕಂಡು ಬಂದಿದೆಯೆಂದು ನೀಡಿರುವ ವರದಿಯನ್ನು ಪರಿಗಣಿಸದೇ ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಮುಕ್ತಾಯಗೊಳಿಸಿ ಉಳಿದ ಅವಧಿಗೆ ಸಾರ್ವಜನಿಕ ಸೇವೆ ಮಾಡಲು ಅವಕಾಶ ಕಲ್ಪಿಸಿಕೊಡಬೇಕೆಂದು ಕೋರಿರುತ್ತಾರೆ.

ಈ ಪ್ರಕರಣದಲ್ಲಿ ಮಧುಗಿರಿ ತಾಲ್ಲೂಕಿನ ಚಂದ್ರಗಿರಿ ಗ್ರಾಮ ಪಂಚಾಯಿತಿಯ ಹಿಂದಿನ ಅಧ್ಯಕ್ಷರು ಶ್ರೀಮತಿ ಲಕ್ಷ್ಮಿದೇವಿ ರವರ ಮೇಲಿನ ಆರೋಪಗಳ ಕುರಿತಂತೆ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಹಾಗೂ ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿನ ಅಂಶಗಳು ಈ ಕೆಳಕಂಡಂತಿದೆ:-

- ಶ್ರೀಮತಿ ಲಕ್ಷ್ಮೀದೇವಮ್ಮ, ಅಧ್ಯಕ್ಷರು ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು ರವರು ಗ್ರಾಮ ಪಂಚಾಯಿತಿಯಲ್ಲಿ ಅವ್ಯವಹಾರ ಮತ್ತುನ ಕರ್ತವ್ಯಲೋಪ

ಎಸಗಿರುವ ಸಂಬಂಧ ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು ರವರಿಂದ ವರದಿ ಪಡೆದು ಈ ಬಗ್ಗೆ ಶ್ರೀಮತಿ ಲಕ್ಷ್ಮೀದೇವಮ್ಮರವರಿಂದ ಸಮಜಾಯಿಷಿ ಪಡೆದು ಪರಿಶೀಲಿಸಿ ಇವರು ನೀಡಿರುವ ಉತ್ತರ ಮತ್ತು ದಾಖಲಾತಿಗಳು ಸಮರ್ಥವಾಗಿರುವುದಿಲ್ಲವೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ತುಮಕೂರು ಜಿಲ್ಲಾ ಪಂಚಾಯತ್ ರವರು ವರದಿ ನೀಡಿರುವುದಾಗಿ ಈ ಸಂಬಂಧ ಸರ್ಕಾರದಿಂದ ಬಂದ ಪ್ರಸ್ತಾವನೆಯನ್ನು ಪರಿಶೀಲಿಸಿ ಶ್ರೀಮತಿ ಲಕ್ಷ್ಮೀದೇವಿ ರವರಿಗೆ ನೋಟೀಸ್ ನೀಡಿ ವಿಚಾರಣೆ ನಡೆಸಿ ಅವರಿಂದ ಉತ್ತರ ಪಡೆಯಲಾಗಿರುತ್ತದೆ. ಅವರ ಮೇಲಿರುವ ದೂರಿಗೆ ಸಂಬಂಧಿಸಿದಂತೆ ಸರಿಯಾದ ಉತ್ತರ ನೀಡಿರುವುದಿಲ್ಲ ಕೆ.ಟಿ.ಪಿ.ಪಿ ನಿಯಮಗಳನ್ನು ಉಲ್ಲಂಘಿಸಿ ಹಣ ಪಾವತಿಸಿರುವುದಾಗಿ ನಿಗಧಿತವಾಗಿ ಸಭೆಗಳನ್ನು ನಡೆಸದೆ ಕರ್ತವ್ಯಲೋಪವೆಸಗಿ ಚಂದ್ರಗಿರಿ ಗ್ರಾಮ ಪಂಚಾಯಿತಿಯಲ್ಲಿ ಅವ್ಯವಹಾರ ಮತ್ತು ಕರ್ತವ್ಯಲೋಪ ಮಾಡಿರುವುದು ಸಾಬೀತಾಗಿರುತ್ತದೆ.

- ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ತುಮಕೂರು ಜಿಲ್ಲೆ, ಮಧುಗಿರಿ ತಾಲ್ಲೂಕಿನ ಚಂದ್ರಗಿರಿ ಗ್ರಾಮ ಪಂಚಾಯಿತಿಯ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಲಕ್ಷ್ಮಿದೇವಿ ರವರು ಕರ್ನಾಟಕ ಗ್ರಾಮ ಸ್ವರಾಜ್ ಅಧಿನಿಯಮ, 1993ರನ್ವಯ ಕರ್ತವ್ಯ ನಿರ್ವಹಿಸದೇ, ನಿಯಮಗಳನ್ನು ಪಾಲಿಸದೇ ಕರ್ತವ್ಯಲೋಪವೆಸಗಿರುವುದು ವಿಚಾರಣಾಧಿಕಾರಿಗಳು ಮತ್ತು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ವಿಚಾರಣೆಯಿಂದ ಸಾಬೀತಾಗಿರುವುದು ಕಂಡುಬಂದಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಶ್ರೀಮತಿ ಲಕ್ಷ್ಮಿದೇವಿ, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರನ್ನು ಚಂದ್ರಗಿರಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನ ಮತ್ತು ಸದಸ್ಯ ಸ್ಥಾನದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/793/ಗ್ರಾಪಂಅ/2019 ಬೆಂಗಳೂರು, ದಿನಾಂಕ:12-02-2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಆಪಾದಿತ ಅಧ್ಯಕ್ಷರಾದ ಶ್ರೀಮತಿ ಲಕ್ಷ್ಮಿದೇವಿ, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರು ಕರ್ನಾಟಕ ಗ್ರಾಮ ಸ್ವರಾಜ್ ಅಧಿನಿಯಮ, 1993ರನ್ವಯ ಕರ್ತವ್ಯ ನಿರ್ವಹಿಸದೇ, ನಿಯಮಗಳನ್ನು ಪಾಲಿಸದೇ ಇರುವ ಆರೋಪಗಳು ವಿಚಾರಣಾಧಿಕಾರಿಗಳು ಮತ್ತು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ವಿಚಾರಣೆಯಿಂದ ಸಾಬೀತಾಗಿರುವುದರಿಂದ **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಶ್ರೀಮತಿ ಲಕ್ಷ್ಮೀದೇವಿ ರವರನ್ನು ಚಂದ್ರಗಿರಿ ಪಂಚಾಯಿತಿ ಸದಸ್ಯ ಸ್ಥಾನ ಮತ್ತು ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಬೇಕಾಗಿತ್ತು. ಆದರೆ, ಸದರಿಯವರು ಚಂದ್ರಗಿರಿಯ ಗ್ರಾಮ ಪಂಚಾಯಿತಿಯ ಪ್ರಸ್ತುತ ಚುನಾಯಿತ ಸದಸ್ಯರಾಗಿ ಮರು ಆಯ್ಕೆಯಾಗದ ಹಿನ್ನೆಲೆಯಲ್ಲಿ ಶ್ರೀಮತಿ ಲಕ್ಷ್ಮಿದೇವಿ ರವರನ್ನು ಈ ದಿನಾಂಕದಿಂದ ಮುಂದಿನ ಆರು(06) ವರ್ಷಗಳವರೆಗೆ ಯಾವುದೇ ಪಂಚಾಯಿತಿ ಚುನಾವಣೆಗೆ ಸ್ಪರ್ಧಿಸದಂತೆ ಅವರನ್ನು ಅನರ್ಹಗೊಳಿಸಿ ಸರ್ಕಾರವು ಆದೇಶಿಸಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 12/02/21
(ನವೀನ್ ಕುಮಾರ್.ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ.

3. ಕಾರ್ಯನಿರ್ವಾಹಕ ಅಧಿಕಾರಿ, ಮಧುಗಿರಿ ತಾಲ್ಲೂಕು ಪಂಚಾಯಿತಿ, ತುಮಕೂರು ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
5. ಶ್ರೀಮತಿ ಲಕ್ಷ್ಮಿದೇವಿ, ಅಧ್ಯಕ್ಷರು, ಚಂದ್ರಗಿರಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ
6. ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್–1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

****